**ಪ್ರಧಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಿಹರ**

**ಸಿ ಸಿ ನಂ. 2378/2021**

| | | |
|---|---|---|
| ಹೆಸರು | ಸೂರಜ್ | PW –3 |
| ತಂದೆಯ ಹೆಸರು | ಡಿ. ಜಗದೀಶ್ | CW –3 |
| ವಯಸ್ಸು | 30 | |
| ಉದ್ಯೋಗ | ವ್ಯವಹಾರ | ದಿನಾಂಕಃ 09.10.2024 |
| ವಾಸ | ಹರಿಹರ | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ ಸಸಅ ರವರಿಂದ ಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದು ಅಪರಾಧ ವಿವರ ನಮೂನೆ ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುತ್ತಾರೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ.2 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 3–4 ವರ್ಷಗಳ ಹಿಂದೆ ಗುತ್ತೂರು ರಸ್ತೆಯಲ್ಲಿ ನನ್ನ ವಯಕ್ತಿಕ ಕೆಲಸದ ನಿಮಿತ್ತ ಹೋಗುತ್ತಿರುವಾಗ, ಪೋಲಿಸರು ನಿಪಿ.2 ಕ್ಕೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದರೆ ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿರುವುದಿಲ್ಲ, ಸಾಕ್ಷಿಯು ನಿಪಿ.3 ರ ಛಾಯಚಿತ್ರವನ್ನು ತೋರಿಸಲಾಗಿ ಅದರಲ್ಲಿ ತಾನು ಇರುವುದನ್ನು ಒಪ್ಪಿಕೊಳ್ಳುತ್ತಾರೆ. ಯಾವ ಕಾರಣಕ್ಕಾಗಿ ಸದರಿ ಚಾಯಾಚಿತ್ರವನ್ನು ತೆಗೆದಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಸಲು ಮಾನ್ಯ ಎ.ಪಿ.ಪಿ ಯವರು ಕೋರಿದ್ದು, ಸಂಗತಿಗಳನ್ನು ಪರೀಶಿಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟಿ ಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲು ಶ್ರೀ ಎ.ಪಿ.ಪಿ. ಯವರಿಂದಃ**

ದಿನಾಂಕ 11.02.2021 ರಂದು ಪೋಲಿಸರು ನನ್ನನ್ನು ಮತ್ತು ಚಾಸಾ.2 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು ಪ್ರಕರಣ ವಿದ್ಯಮಾನವನ್ನು ತಿಳಿಸಿ, ಪಂಚರಾಗಲು ಸಹಕರಿಸಲು ಕೇಳಿದ ಮೇರೆಗೆ, ದಿನಾಂಕ 10.02.2021 ರಂದು ಆರೋಪಿ ಮತ್ತು ಚಾಸಾ.1 ರವರ ಮಧ್ಯ ಆದ ಗಲಾಟೆಯ ವಿಚಾರವಾಗಿ ಪಂಚರ ಸಮಕ್ಷಮ ನಿಪಿ.2 ರಂತೆ ಪಂಚನಾಮೆಯನ್ನು ಜರುಗಿಸಿ ನಿಪಿ.3 ರಂತೆ ಛಾಯಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ . ಸದರಿ ಪಂಚನಾಮೆಯನ್ನು 10.48 ರಿಂದ 11.30 ವರೆಗೆ ಜರುಗಿಸಿ, ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯಮಾಡಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಿದೆ)

ಓ ಹೇ ಕೇ ಸರಿ ಇದೆ

Sd/-

ಸಿ/ಸಿ ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಮ್ಎಫ್ ಸಿ ನ್ಯಾಯಾಲಯ,ಹರಿಹರ.